# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **(295) 115** |
| ಸದಸ್ಯರ ಹೆಸರು | : | ಡಾ॥ ವೈ.ಎ ನಾರಾಯಣ ಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.07.2019 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಪ್ರೌಢ ಶಾಲಾ ವಿಭಾಗದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಹ ಶಿಕ್ಷಕರುಗಳು ಮುಖ್ಯೋಪಾಧ್ಯಾಯರಾಗಿ ಪದೋನ್ನತಿ ಹೊಂದಲು ಅರ್ಹರಿರುವವರ ಸಂಖ್ಯೆ ಎಷ್ಟು; (ಪಟ್ಟಿಯನ್ನು ನೀಡುವುದು) | • ಬೆಂಗಳೂರು ಆಯುಕ್ತಾಲಯಕ್ಕೆ ಸಂಬಂಧಿಸಿದಂತೆ, 574<br>• ಧಾರವಾಡ ಆಯುಕ್ತಾಲಯಕ್ಕೆ ಸಂಬಂಧಿಸಿದಂತೆ 350<br>• ಕಲಬುರುಗಿ ಆಯುಕ್ತಾಲಯಕ್ಕೆ ಸಂಬಂಧಿಸಿದಂತೆ 355<br>ಒಟ್ಟು: 1279 |
| ಆ. | ಎಷ್ಟು ವರ್ಷಗಳಿಂದ ಪದೋನ್ನತಿ ಪ್ರಕ್ರಿಯೆ ಸ್ಥಗಿತಗೊಂಡಿದೆ; ಇದಕ್ಕೆ ಕಾರಣವೇನು; | ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 380 ಸೇಐನಿ 2018(ಭಾಗ-1) ದಿನಾಂಕ:03/08/2018ರಲ್ಲಿ ಬಿ.ಕೆ ಪವಿತ್ರ ಪ್ರಕರಣ ಸಂಬಂಧ ಎಂ.ಎ ಸಂಖ್ಯೆ:1151/2018 ಹಾಗೂ ರಿಟ್ ಅರ್ಜಿ ಸಂಖ್ಯೆ:823/2018 827/2018 ಮತ್ತಿತರರ ಪ್ರಕರಣಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇದ್ದ ಕಾರಣ ಯಾವುದೇ ಮುಂಬಡ್ತಿ ನೀಡಬಾರದೆಂದು ಆದೇಶ ನೀಡಿದ್ದ ಹಿನ್ನೆಲೆಯಲ್ಲಿ 03 ವರ್ಷಗಳಿಂದ ಪದೋನ್ನತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿತ್ತು. |
| ಇ | ಯಾವ ಕಾಲಮಿತಿಯೊಳಗೆ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು? | ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 186 ಎಸ್‌ಆರ್‌ಎಸ್ 2018 ದಿನಾಂಕ:27/02/2019ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿದ್ದಂತಹ ಪ್ರಕರಣಗಳು ಇತ್ಯರ್ಥವಾದ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957ರ ನಿಯಮ 10ರಂತೆ ಜೇಷ್ಠತೆ ಅಧಿನಿಯಮ 2017ರನ್ವಯ ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 3 ಎಸ್‌ಆರ್‌ಎಸ್ 2019 ದಿನಾಂಕ:04/06/2019ರನ್ವಯ ಕರ್ನಾಟಕ ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017ರನ್ವಯ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಆದೇಶವಾಗಿರುತ್ತದೆ. ಅದರಂತೆ ಪ್ರೌಢಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಮೀಸಲಾತಿಗೆ ಅನುಗುಣವಾಗಿ ಪರಿಷ್ಕರಿಸಿ ಅಂತಿಮಗೊಳಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಅಂತಿಮ ಪ್ರಕ್ರಿಯೆ ಮುಗಿದ ನಂತರ ಶೀಘ್ರದಲ್ಲಿ ಮುಂಬಡ್ತಿ ಪ್ರಕ್ರಿಯೆಯನ್ನು ಚಾಲನೆಗೊಳಿಸಲಾಗುವುದು. |

ಸಂಖ್ಯೆ: ಇಪಿ 22 ಎಸ್‌ಓಹೆಚ್ 2019

(ಎಸ್. ಆರ್ ಶ್ರೀನಿವಾಸ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.